# ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ

**ಸಿ.ಸಿ.ನಂ.ಃ 611/2013**

ಸಿ.ಡಬ್ಲ್ಯು. 5

ಪಿ.ಡಬ್ಲ್ಯು. 5

| | | |
|---|---|---|
| ಸಾಕ್ಷಿದಾರರ ಹೆಸರು | : | ಕೃಷ್ಣಾ ಪಟಗಾರ |
| ತಂದೆಯ/ಗಂಡನ ಹೆಸರು | : | ನಾರಾಯಣ ಪಟಗಾರ |
| ವಯಸ್ಸು | : | 36 ವರ್ಷ |
| ಉದ್ಯೋಗ | : | ಗಾರೆ ಕೆಲಸ |
| ವಾಸ್ತವ್ಯ | : | ಹಳಕಾರ, ಕುಮಟಾ ತಾಲೂಕ |

**(ಇಂದು ದಿನಾಂಕಃ 09-10-2018 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)**

## ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

1. ನನಗೆ ಚಾ.ಸಾ. 4 ರವರ ಪರಿಚಯವಿದೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಪಂಚನಾಮೆ ಜರುಗಿಸಿಲ್ಲ. ಅಂದಾಜು 2 - 3 ವರ್ಷಗಳ ಹಿಂದೆ ನಾನು ವೈಯಕ್ತಿಕ ಕೆಲಸಕ್ಕೆ ಪೊಲೀಸ್ ಠಾಣೆಗೆ ಹೋಗಿದ್ದ ಸಮಯ ಪೊಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸದ್ರಿ ದಾಖಲೆ ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿ.ಪಿ. 3 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ಈಗ ನಿ.ಪಿ.3(ಸಿ) ಎಂದು ಗುರುತಿಸಲಾಯಿತು. ನಿ.ಪಿ.3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

## ಪಾಟೀ ಸವಾಲುಃ ಸ.ಸ.ಅ. ರವರಿಂದ ಃ-

1. ದಿನಾಂಕ 26-12-2013 ರಂದು ಮುಂಜಾನೆ 11-00 ರಿಂದ 12-00 ಗಂಟೆಯವರೆಗೆ ನನ್ನ ಸಮಕ್ಷಮ ಪೊಲೀಸರು ನಿ.ಪಿ.3 ರಂತೆ ಪಂಚನಾಮೆಯನ್ನು ಜರುಗಿಸಿದ್ದು ಈ ಪ್ರಕರಣದ

ಆರೋಪಿ ನಂ.1 ರವರು ನಡೆಸುತ್ತಿದ್ದ ಮನೆಯನ್ನು ಚಾ.ಸಾ.1 ರವರು ತೋರಿಸಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.3 ರಂತೆ ಪಂಚನಾಮೆಯನ್ನು ಜರುಗಿಸಿದ್ದರೂ ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಂ.ಡಿ.ಆರ್. ವಕೀಲರು ಗೈರು-ಹಾಜರಿದ್ದು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಜೆ.ಎಂ.ಎಫ್.ಸಿ. ಕುಮಟಾ.